**Akashvani : Bangalore**
**Regional Bulletin In Kannada**
**04.06.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

<u>ಮುಖ್ಯಾಂಶಗಳು</u>

**೧. ನಿರ್ಣಾಯಕ ಹಂತದಲ್ಲಿ ೨೮ ಲೋಕಸಭಾ ಕ್ಷೇತ್ರಗಳ ಮತ ಎಣಿಕೆ ; ಬಿಜೆಪಿಗೆ ೧೭, ಕಾಂಗ್ರೆಸ್ ೯ ಹಾಗೂ ಜೆಡಿಎಸ್‌ಗೆ ೨ ಕ್ಷೇತ್ರಗಳಲ್ಲಿ ಮುನ್ನಡೆ**

**೨. ಮೂವರು ಮಾಜಿ ಮುಖ್ಯಮಂತ್ರಿಗಳು ಹಾಗೂ ಇಬ್ಬರು ಕೇಂದ್ರ ಸಚಿವರಿಗೆ ಗೆಲುವು**

**೩. ವಾರಾಣಸಿ ಕ್ಷೇತ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಹ್ಯಾಟ್ರಿಕ್ ಜಯ**

**೪. ವಿಧಾನಸಭೆಯಿಂದ ವಿಧಾನ ಪರಿಷತ್‌ನ ದ್ವೈವಾರ್ಷಿಕ ಚುನಾವಣೆ ; ಎಲ್ಲ ೧೧ ನಾಮಪತ್ರಗಳು ಕ್ರಮಬದ್ಧ**

**<><*<><>*><>**

ತೀವ್ರ ಕುತೂಹಲ ಕೆರಳಿಸಿದ್ದ ರಾಜ್ಯದ ೨೮ ಲೋಕಸಭಾ ಕ್ಷೇತ್ರಗಳ ಚುನಾವಣೆಯಲ್ಲಿ ಬಿಜೆಪಿ ೧೭ ಮತ್ತು ಕಾಂಗ್ರೆಸ್ ೯ ಕ್ಷೇತ್ರಗಳಲ್ಲಿ ಮುನ್ನಡೆಯಲಿದೆ. ಜೆಡಿಎಸ್ ಮಂಡ್ಯ ಮತ್ತು ಕೋಲಾರ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದೆ. ಇತ್ತೀಚಿನ ಮಾಹಿತಿಯಂತೆ ಬಿಜೆಪಿ ೧೫ ಕ್ಷೇತ್ರಗಳಲ್ಲಿ, ಕಾಂಗ್ರೆಸ್ ೭ ಕ್ಷೇತ್ರಗಳಲ್ಲಿ ಗೆದ್ದಿದೆ. ಏಪ್ರಿಲ್ ೨೬ ಮತ್ತು ಮೇ ೭ ರಂದು ಎರಡು ಹಂತಗಳಲ್ಲಿ ತಲಾ ೧೪ ಲೋಕಸಭಾ ಕ್ಷೇತ್ರಗಳಿಗೆ ಮತದಾನವಾಗಿತ್ತು. ಇಂದು ಬೆಳಿಗ್ಗೆ ೮ ಗಂಟೆಗೆ ಮತ ಎಣಿಕೆ ಆರಂಭವಾಯಿತು. ಮೂವರು ಮಾಜಿ ಮುಖ್ಯಮಂತ್ರಿಗಳು, ಇಬ್ಬರು ಕೇಂದ್ರ ಸಚಿವರು ಗೆಲುವಿನತ್ತ ಸಾಗಿದ್ದಾರೆ. ಕಾಂಗ್ರೆಸ್ ಎಲ್ಲಾ ೨೮ ಕ್ಷೇತ್ರಗಳಲ್ಲಿ ಸ್ಪರ್ಧಿಸಿತ್ತು. ಬಿಜೆಪಿ ೨೫ ಮತ್ತು ಜೆಡಿಎಸ್ ಮೂರು ಕ್ಷೇತ್ರಗಳಲ್ಲಿ ತನ್ನ ಉಮೇದುವಾರರನ್ನು ಕಣಕ್ಕಿಳಿಸಿತ್ತು. ಕಳೆದ ೨೦೧೯ ರಲ್ಲಿ ಬಿಜೆಪಿ ೨೫, ಜೆಡಿಎಸ್ ಮತ್ತು ಕಾಂಗ್ರೆಸ್ ತಲಾ ಒಂದೊಂದು ಕ್ಷೇತ್ರಗಳಲ್ಲಿ ಗೆದ್ದಿತ್ತು. ಮಂಡ್ಯ ಕ್ಷೇತ್ರದಲ್ಲಿ ಪಕ್ಷೇತರರಾಗಿ ಸುಮಲತಾ ಅಂಬರೀಷ್ ಗೆಲುವು ದಾಖಲಿಸಿದ್ದರು. ರಾಜ್ಯದಲ್ಲಿ ತೀವ್ರ ಕುತೂಹಲ ಕೆರಳಿಸಿದ್ದ ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಮಾಜಿ ಪ್ರಧಾನಿ ದೇವೇಗೌಡರ ಅಳಿಯ, ಖ್ಯಾತ ಹೃದಯ ತಜ್ಞ ಬಿಜೆಪಿ ಅಭ್ಯರ್ಥಿ ಡಾ. ಸಿ.ಎನ್. ಮಂಜುನಾಥ್ ೨ ಲಕ್ಷದ ೬೮ ಸಾವಿರದ ೯೪ ಮತಗಳ ಅಂತರದಿಂದ ಮೇಲುಗೈ ಸಾಧಿಸಿದ್ದಾರೆ. ಹಾಲಿ ಸಂಸದ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಹೋದರ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್ ಹಿನ್ನಡೆ ಅನುಭವಿಸಿದ್ದಾರೆ. ಧಾರವಾಡದಲ್ಲಿ ಕೇಂದ್ರ ಸಚಿವ ಬಿಜೆಪಿ ಅಭ್ಯರ್ಥಿ ಪ್ರಲ್ಹಾದ್ ಜೋಶಿ ೯೭ ಸಾವಿರದ ೩೨೪

ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಕಾಂಗ್ರೆಸ್‌ನ ವಿನೋದ್ ಆಸೂಟಿ ಪರಾಭವಗೊಂಡಿದ್ದಾರೆ. ಬೆಂಗಳೂರು ಉತ್ತರದಲ್ಲಿ ಕೇಂದ್ರ ಸಚಿವೆ ಬಿಜೆಪಿ ಅಭ್ಯರ್ಥಿ ಶೋಭಾ ಕರಂದ್ಲಾಜೆ ೨ ಲಕ್ಷದ ೫೯ ಸಾವಿರದ ೪೭೬ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಪ್ರೊಫೆಸರ್ ಎಂ.ವಿ. ರಾಜೀವ್ ಗೌಡ ಪರಾಭವಗೊಂಡಿದ್ದಾರೆ. ಚುನಾವಣಾಧಿಕಾರಿ ದಯಾನಂದ ಅವರು, ಶೋಭಾ ಕರಂದ್ಲಾಜೆ ಅವರಿಗೆ ಪ್ರಮಾಣಪತ್ರ ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶೋಭಾ ಕರಂದ್ಲಾಜೆ ವಿಕಸಿತ ಭಾರತ ನಿರ್ಮಿಸಲು ತಮ್ಮ ಗೆಲುವು ಸಹಕಾರಿಯಾಗಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಕೈಬಲ ಪಡಿಸುವುದು ತಮ್ಮ ಗುರಿ ಎಂದರು.

**ಧ್ವನಿ : ಶೋಭಾ ಕರಂದ್ಲಾಜೆ**

ಈ ಬಾರಿ ಮೂರು ಮಂದಿ ಮಾಜಿ ಮುಖ್ಯಮಂತ್ರಿಗಳು ಕಣಕ್ಕಿಳಿದಿದ್ದು, ಮೂರು ಮಂದಿಯೂ ಗೆಲುವಿನ ನಗೆ ಬೀರಿದ್ದಾರೆ. ಮಂಡ್ಯದಲ್ಲಿ ಮಾಜಿ ಮುಖ್ಯಮಂತ್ರಿ ಜೆಡಿಎಸ್ ಅಭ್ಯರ್ಥಿ ಹೆಚ್.ಡಿ. ಕುಮಾರಸ್ವಾಮಿ ೨ ಲಕ್ಷ ೮೪ ಸಾವಿರದ ೬೨೦ ಮತಗಳ ಭಾರೀ ಅಂತರದಿಂದ ಗೆದ್ದಿದ್ದು, ಕಾಂಗ್ರೆಸ್‌ನ ವೆಂಕಟರಮಣೇಗೌಡ ಸೋಲುಂಡಿದ್ದಾರೆ. ಬೆಳಗಾವಿಯಲ್ಲಿ ಮಾಜಿ ಮುಖ್ಯಮಂತ್ರಿ ಬಿಜೆಪಿಯ ಜಗದೀಶ್ ಶೆಟ್ಟರ್ ೧ ಲಕ್ಷ ೭೦ ಸಾವಿರದ ೪೯ ಮತಗಳ ಅಂತರದಿಂದ ಮುನ್ನಡೆಯಲ್ಲಿದ್ದಾರೆ. ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಪುತ್ರ ಕಾಂಗ್ರೆಸ್‌ನ ಮೃಣಾಲ್ ರವೀಂದ್ರ ಹೆಬ್ಬಾಳ್ಕರ್ ಹಿನ್ನಡೆಯಲ್ಲಿದ್ದಾರೆ. ಹಾವೇರಿಯಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ೪೩ ಸಾವಿರದ ೫೧೩ ಮತಗಳ ಅಂತರದಿಂದ ಅವರ ಸಮೀಪ ಸ್ಪರ್ಧಿ ಕಾಂಗ್ರೆಸ್‌ನ ಆನಂದ್‌ಸ್ವಾಮಿ ಗಡ್ಡದೇವರಮಠ ವಿರುದ್ಧ ಗೆಲುವು ಸಾಧಿಸಿದ್ದಾರೆ. ವಿಜಯೋತ್ಸವ ಸಮಾರಂಭದಲ್ಲಿ ಅವರು ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರ ಕೈ ಬಲಪಡಿಸುವುದು ತಮ್ಮ ಗುರಿ ಎಂದರು.

**ಧ್ವನಿ - ಬಸವರಾಜ ಬೊಮ್ಮಾಯಿ**

ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್‌ನ ಆರು ಸಚಿವರ ಮಕ್ಕಳಿಗೆ ಟಿಕೆಟ್ ಘೋಷಿಸಲಾಗಿತ್ತು. ಈ ಪೈಕಿ ಮೂವರು ಗೆಲುವು ಸಾಧಿಸುವತ್ತ ಸಾಗಿದ್ದಾರೆ. ಚಿಕ್ಕೋಡಿ ಕ್ಷೇತ್ರದಲ್ಲಿ ಸಚಿವ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕಾ ಜಾರಕಿಹೊಳಿ ಅವರು ಬಿಜೆಪಿ ಅಭ್ಯರ್ಥಿ ಅಣ್ಣಾ ಸಾಹೇಬ್ ಜೊಲ್ಲೆ ಅವರ ವಿರುದ್ಧ ೯೨ ಸಾವಿರದ ೬೫೫ ಮತಗಳ ಮುನ್ನಡೆ ಸಾಧಿಸಿದ್ದಾರೆ. ಬೆಳಗಾವಿ ಕ್ಷೇತ್ರದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರ ಮೃಣಾಲ್ ಹೆಬ್ಬಾಳ್ಕರ್ ವಿರುದ್ಧ ಬೆಳಗಾವಿಯಲ್ಲಿ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ೧ ಲಕ್ಷ ೭೨ ಸಾವಿರದ ೮೨೮ ಮತಗಳ ಅಂತರದಲ್ಲಿ ಮುನ್ನಡೆಯಲ್ಲಿದ್ದಾರೆ. ಬಾಗಲಕೋಟೆ ಕ್ಷೇತ್ರದಲ್ಲಿ ಸಚಿವ ಶಿವಾನಂದ ಪಾಟೀಲ್ ಪುತ್ರಿ ಸಂಯುಕ್ತಾ

ಪಾಟೀಲ್ ವಿರುದ್ಧ  ಪ್ರತಿಸ್ಪರ್ಧಿ ಬಿಜೆಪಿಯ ಪಿ.ಸಿ ಗದ್ದಿಗೌಡರ್ ೬೮ ಸಾವಿರದ ೩೯೯ ಮತಗಳ ಅಂತರದಲ್ಲಿ ಗೆಲುವು ಸಾಧಿಸಿದ್ದಾರೆ. ಬೀದರ್ ಕ್ಷೇತ್ರದಲ್ಲಿ ಸಚಿವ ಈಶ್ವರ್ ಖಂಡ್ರೆ ಪುತ್ರ ಸಾಗರ್ ಖಂಡ್ರೆ ಅವರು ೧ ಲಕ್ಷದ ೨೮ ಸಾವಿರದ ೮೭೫ ಮತಗಳ ಅಂತರದಲ್ಲಿ ಗೆಲುವು ಸಾಧಿಸಿದ್ದಾರೆ. ರಾಜ್ಯದ ಕಿರಿಯ ಅಭ್ಯರ್ಥಿಯಾಗಿರುವ ಅವರು ಹಾಲಿ ಕೇಂದ್ರ ಸಚಿವ  ಬಿಜೆಪಿಯ ಭಗವಂತ ಖೂಬಾ ಅವರನ್ನು ಪರಾಭವಗೊಳಿಸಿದ್ದಾರೆ. ಚಾಮರಾಜನಗರ ಎಸ್‌ಸಿ ಮೀಸಲು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ಸಚಿವ ಹೆಚ್.ಸಿ ಮಹದೇವಪ್ಪ ಪುತ್ರ ಸುನೀಲ್ ಬೋಸ್ ೧ ಲಕ್ಷದ ೮೮ ಸಾವಿರದ ೭೦೬ ಮತಗಳ ಅಂತರದಲ್ಲಿ ಗೆಲುವು ಸಾಧಿಸಿದ್ದಾರೆ. ಬಿಜೆಪಿ ಅಭ್ಯರ್ಥಿ ಎಸ್ ಬಾಲರಾಜ್ ಪರಾಭವಗೊಂಡಿದ್ದಾರೆ. ಬೆಂಗಳೂರು ದಕ್ಷಿಣ ಕೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ಸಚಿವ ರಾಮಲಿಂಗಾರೆಡ್ಡಿ ಅವರ ಪುತ್ರಿ ಸೌಮ್ಯಾ ರೆಡ್ಡಿ ಹಿನ್ನಡೆಯಲ್ಲಿದ್ದಾರೆ. ಬಿಜೆಪಿ ಅಭ್ಯರ್ಥಿ ತೇಜಸ್ವಿ ಸೂರ್ಯ ೨ ಲಕ್ಷದ ೭೩ ಸಾವಿರದ ೬೫೭ ಮತಗಳ ಅಂತರದಲ್ಲಿ ಮುನ್ನಡೆಯಲ್ಲಿದ್ದು, ಎರಡನೇ ಅವಧಿಗೆ ಸಂಸತ್ ಪ್ರವೇಶಿಸುವ ನಿಟ್ಟಿನಲ್ಲಿ ಸಾಗಿದ್ದಾರೆ. ಹಾಸನದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ. ಶ್ರೇಯಸ್ ಪಟೇಲ್ ೪೨ ಸಾವಿರದ ೬೪೯ ಮತಗಳ ಅಂತರದಿಂದ ಗೆದ್ದಿದ್ದಾರೆ. ಜೆಡಿಎಸ್‌ನ ಪ್ರಜಲ್ವ್ ರೇವಣ್ಣ ಪರಾಭವಗೊಂಡಿದ್ದಾರೆ. ತೀವ್ರ ಪ್ರತಿಷ್ಠೆಯ ಕಣವಾಗಿರುವ ಕಲಬುರಗಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಳಿಯ ಕಾಂಗ್ರೆಸ್‌ನ ಅಭ್ಯರ್ಥಿ ರಾಧಾಕೃಷ್ಣ ದೊಡ್ಡಮನಿ ೨೭ ಸಾವಿರದ ೨೦೫ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಹಾಲಿ ಸಂಸದ ಬಿಜೆಪಿ ಉಮೇಶ್ ಜಾಧವ್ ಪರಾಭವಗೊಂಡಿದ್ದಾರೆ.  ಉತ್ತರಕನ್ನಡದಲ್ಲಿ ಮಾಜಿ ಸ್ಪೀಕರ್ ಬಿಜೆಪಿ ಅಭ್ಯರ್ಥಿ ವಿಶ್ವೇಶ್ವರ ಹೆಗಡೆ ಕಾಗೇರಿ ೩ ಲಕ್ಷ ೩೭ ಸಾವಿರದ ೪೨೮ ಮತಗಳ ಭಾರೀ ಅಂತರದಲ್ಲಿ ಗೆಲುವು ಸಾಧಿಸಿದ್ದಾರೆ. ಮಾಜಿ ಶಾಸಕಿ ಕಾಂಗ್ರೆಸ್ ಅಭ್ಯರ್ಥಿ ಅಂಜಲಿ ನಿಂಬಾಳ್ಕರ್ ಪರಾಭವಗೊಂಡಿದ್ದಾರೆ. ಮಹಿಳೆಯರ ಸ್ಪರ್ಧೆಯಿಂದ ಕುತೂಹಲ ಕೆರಳಿಸಿದ್ದ ದಾವಣಗೆರೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಭಾ ಮಲ್ಲಿಕಾರ್ಜುನ್ ೨ ಲಕ್ಷ ೬ ಸಾವಿರದ ೯೪ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಬಿಜೆಪಿಯ ಗಾಯಿತ್ರಿ ಸಿದ್ದೇಶ್ವರ್ ಪರಾಭವಗೊಂಡಿದ್ದಾರೆ. ಮೈಸೂರಿನಲ್ಲಿ ಬಿಜೆಪಿ ಅಭ್ಯರ್ಥಿ ಮಹಾರಾಜ ಯದುವೀರ್ ಒಡೆಯರ್ ೧ ಲಕ್ಷ ೩೯ ಸಾವಿರದ ೨೬೨ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ್ ಪರಾಭವಗೊಂಡಿದ್ದಾರೆ. ವಿಜಯಪುರದಲ್ಲಿ ಹಾಲಿ ಸಂಸದ ಬಿಜೆಪಿ ಅಭ್ಯರ್ಥಿ ರಮೇಶ್ ಜಿಗಜಿಣಗಿ ೭೭ ಸಾವಿರದ ೨೨೯ ಮತಗಳ ಅಂತರದಿಂದ ಗೆದ್ದಿದ್ದಾರೆ. ಕಾಂಗ್ರೆಸ್‌ನ ರಾಜು ಆಲಗೂರು ಪರಾಭವಗೊಂಡಿದ್ದಾರೆ. ಕೊಪ್ಪಳದಲ್ಲಿ ಕಾಂಗ್ರೆಸ್‌ನ ರಾಜಶೇಖರ್ ಹಿಟ್ನಾಳ್ ೪೬ ಸಾವಿರದ ೩೫೭ ಮತಗಳ ಅಂತರದಿಂದ ಮುನ್ನಡೆ ಸಾಧಿಸಿದ್ದಾರೆ. ಬಿಜೆಪಿಯ ಬಸವರಾಜ ಕ್ಯಾವಟರ್ ಹಿನ್ನಡೆ ಅನುಭವಿಸಿದ್ದಾರೆ. ಬಳ್ಳಾರಿಯಲ್ಲಿ ಕಾಂಗ್ರೆಸ್ ಶಾಸಕ ಇ. ತುಕಾರಾಮ್ ೯೮ ಸಾವಿರದ ೯೯೨ ಮತಗಳ ಅಂತರದಿಂದ ಗೆದ್ದಿದ್ದಾರೆ. ಬಿಜೆಪಿ ಅಭ್ಯರ್ಥಿ ಮಾಜಿ ಸಚಿವ ಬಿ. ಶ್ರೀರಾಮುಲು ಪರಾಭವಗೊಂಡಿದ್ದಾರೆ. ಶಿವಮೊಗ್ಗದಲ್ಲಿ ಹಾಲಿ ಸಂಸದ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ

ಪುತ್ರ ಬಿಜೆಪಿ ಅಭ್ಯರ್ಥಿ ಬಿ.ವೈ. ರಾಘವೇಂದ್ರ ೨ ಲಕ್ಷ ೪೩ ಸಾವಿರದ ೭೧೫ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪ ಪುತ್ರಿ ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ್ ಹಾಗೂ ಪಕ್ಷೇತರರಾಗಿ ಸ್ಪರ್ಧಿಸಿದ್ದ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಪರಾಭವಗೊಂಡಿದ್ದಾರೆ. ಉಡುಪಿ/ಚಿಕ್ಕಮಗಳೂರು ಕ್ಷೇತ್ರದಲ್ಲಿ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಬಿಜೆಪಿ ಅಭ್ಯರ್ಥಿ ಕೋಟಾ ಶ್ರೀನಿವಾಸ ಪೂಜಾರಿ ೨ ಲಕ್ಷದ ೫೯ ಸಾವಿರದ ೧೭೫ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಜಯಪ್ರಕಾಶ್ ಹೆಗಡೆ ಪರಾಭವಗೊಂಡಿದ್ದಾರೆ. ಹೊಸ ಮುಖಗಳಿಂದ ತೀವ್ರ ಕುತೂಹಲ ಕೆರಳಿಸಿದ್ದ ದಕ್ಷಿಣ ಕನ್ನಡದಲ್ಲಿ ಬಿಜೆಪಿ ಅಭ್ಯರ್ಥಿ ಕ್ಯಾಪ್ಟನ್ ಬ್ರಿಜೇಶ್ ಚೌಟ ೧ ಲಕ್ಷ ೪೯ ಸಾವಿರದ ೨೦೮ ಮತಗಳಿಂದ ಗೆಲುವು ಸಾಧಿಸಿದ್ದಾರೆ. ಕಾಂಗ್ರೆಸ್‌ನ ಪದ್ಮರಾಜ್ ಪೂಜಾರಿ ಪರಾಭವಗೊಂಡಿದ್ದಾರೆ. ಚಿತ್ರದುರ್ಗದಲ್ಲಿ ಮಾಜಿ ಉಪಮುಖ್ಯಮಂತ್ರಿ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ೪೮ ಸಾವಿರದ ೧೨೧ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಸೋಲುಂಡಿದ್ದಾರೆ.

ತುಮಕೂರಿನಲ್ಲಿ ಮಾಜಿ ಸಚಿವ ಬಿಜೆಪಿ ಅಭ್ಯರ್ಥಿ ವಿ. ಸೋಮಣ್ಣ ೧ ಲಕ್ಷ ೭೫ ಸಾವಿರದ ೫೯೪ ಮತಗಳ ಅಂತರದಿಂದ ಗೆದ್ದಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಮುದ್ದ ಹನುಮೇಗೌಡ ಪರಾಭವಗೊಂಡಿದ್ದಾರೆ.

ಬೆಂಗಳೂರು ಕೇಂದ್ರದಲ್ಲಿ ಬಿಜೆಪಿ ಅಭ್ಯರ್ಥಿ ಪಿ.ಸಿ. ಮೋಹನ್ ೩೨ ಸಾವಿರದ ೭೦೭ ಮತಗಳ ಅಂತರದಿಂದ ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಅಲಿ ಖಾನ್ ವಿರುದ್ಧ ಗೆಲುವು ಸಾಧಿಸಿದ್ದಾರೆ. ಪಿ.ಸಿ ಮೋಹನ್ ಅವರಿಗೆ ಚುನಾವಣಾಧಿಕಾರಿ ಡಾ. ಕೆ. ಹರೀಶ್ ಕುಮಾರ್ ಪ್ರಮಾಣಪತ್ರ ವಿತರಿಸಿದರು.

ಬೆಂಗಳೂರು ದಕ್ಷಿಣದಲ್ಲಿ ಬಿಜೆಪಿಯ ಹಾಲಿ ಸಂಸದ ತೇಜಸ್ವಿ ಸೂರ್ಯ ೨ ಲಕ್ಷ ೭೫ ಸಾವಿರದ ೨೬ ಮತಗಳ ಅಂತರದಿಂದ ಮುನ್ನಡೆ ಸಾಧಿಸಿದ್ದಾರೆ. ಸಚಿವ ರಾಮಲಿಂಗಾರೆಡ್ಡಿ ಪುತ್ರಿ ಕಾಂಗ್ರೆಸ್ ಅಭ್ಯರ್ಥಿ ಸೌಮ್ಯಾ ರೆಡ್ಡಿ ಹಿನ್ನಡೆಯಲ್ಲಿದ್ದಾರೆ.

ಚಿಕ್ಕಬಳ್ಳಾಪುರದಲ್ಲಿ ಮಾಜಿ ಸಚಿವ ಬಿಜೆಪಿ ಅಭ್ಯರ್ಥಿ ಡಾ. ಕೆ. ಸುಧಾಕರ್ ೧ ಲಕ್ಷ ೬೩ ಸಾವಿರದ ೪೬೦ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ರಕ್ಷಾ ರಾಮಯ್ಯ ಪರಾಭವಗೊಂಡಿದ್ದಾರೆ.

ಕೋಲಾರದಲ್ಲಿ ಜೆಡಿಎಸ್ ಅಭ್ಯರ್ಥಿ ಮಲ್ಲೇಶ್ ಬಾಬು ೭೧ ಸಾವಿರದ ೩೮೮ ಮತಗಳ ಅಂತರದಿಂದ ಗೆಲುವು ದಾಖಲಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಕೆ.ವಿ. ಗೌತಮ್ ಪರಾಭವಗೊಂಡಿದ್ದಾರೆ.

ರಾಯಚೂರಿನಲ್ಲಿ ನಿವೃತ್ತ ಐಎಎಸ್ ಅಧಿಕಾರಿ ಕಾಂಗ್ರೆಸ್‌ನ ಜಿ. ಕುಮಾರ ನಾಯಕ್ ೭೯ ಸಾವಿರದ ೭೮೧ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಬಿಜೆಪಿಯ ರಾಜಅಮರೇಶ್ ನಾಯಕ್ ಪರಾಭವಗೊಂಡಿದ್ದಾರೆ.

<><*<><>*><>

ಉತ್ತರ ಪ್ರದೇಶದ ವಾರಾಣಸಿ ಕ್ಷೇತ್ರದಲ್ಲಿ ಪ್ರಧಾನಿ, ಬಿಜೆಪಿಯ ನರೇಂದ್ರ ಮೋದಿ ಅವರು, ತಮ್ಮ ಸಮೀಪದ ಪ್ರತಿಸ್ಪರ್ಧಿ ಕಾಂಗ್ರೆಸ್‌ನ ಅಜಯ್ ರಾಯ್ ಅವರಿಗಿಂತ ೧ ಲಕ್ಷದ ೫೨ ಸಾವಿರದ ೫೧೩ ಮತಗಳಿಂದ ಜಯ ಸಾಧಿಸಿದ್ದಾರೆ. ಹಿಮಾಚಲ ಪ್ರದೇಶದ ಮಂಡಿಕ್ಷೇತ್ರದಲ್ಲಿ ನಟಿ, ಬಿಜೆಪಿಯ ಕಂಗನಾ ರಣವತ್ ಅವರು, ಕಾಂಗ್ರೆಸ್‌ನ ವಿಕ್ರಮಾಧಿತ್ಯಾ ಸಿಂಗ್ ವಿರುದ್ಧ ೭೪ ಸಾವಿರದ ೭೫೫ ಮತಗಳಿಂದ ಗೆಲುವು ಪಡೆದಿದ್ದಾರೆ.

ತಮಿಳುನಾಡಿನ ಕೊಯಮತ್ತೂರು ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಗಣಪತಿ ರಾಜ್‌ಕುಮಾರ್ ಅವರು, ತಮಿಳುನಾಡು ಬಿಜೆಪಿ ಅಧ್ಯಕ್ಷ ಅಣ್ಣಾಮಲೈ ಅವರಿಂದ ೬೨ ಸಾವಿರದ ೭೨೨ ಮತಗಳಿಂದ ಮುನ್ನಡೆ ಸಾಧಿಸಿದ್ದಾರೆ.

ಒಡಿಶಾದ ಪುರಿ ಕ್ಷೇತ್ರದಲ್ಲಿ ಬಿಜೆಪಿಯ ಸಂಬಿತ್ ಪಾತ್ರ ಅವರು, ಬಿಜೆಡಿಯ ಅರೂಪ್ ಮೋಹನ್ ಪಟ್ನಾಯ್ಕ್ ಅವರ ವಿರುದ್ಧ ೯೯ ಸಾವಿರದ ೬೪೭ ಮತಗಳ ಮುನ್ನಡೆಯಲ್ಲಿದ್ದಾರೆ.

ಉತ್ತರಪ್ರದೇಶದ ಮೈನ್‌ಪುರಿ ಕ್ಷೇತ್ರದಲ್ಲಿ ಬಿಜೆಪಿಯ ಜೈವೀರ್ ಸಿಂಗ್ ವಿರುದ್ಧ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಅವರ ಪತ್ನಿ ಡಿಂಪಲ್ ಯಾದವ್ ಅವರು ೨ ಲಕ್ಷದ ೨೧ ಸಾವಿರದ ೬೩೯ ಮತಗಳಿಂದ ಭಾರೀ ಮುನ್ನಡೆ ಸಾಧಿಸಿದ್ದಾರೆ.

<><*<><>*><>

ತಮಿಳುನಾಡಿನ ಒಟ್ಟು ೩೯ ಲೋಕಾಸಭಾ ಕ್ಷೇತ್ರಗಳ ಪೈಕಿ ಡಿಎಂಕೆ ೨೨ ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದ್ದು, ಕಾಂಗ್ರೆಸ್ ೯ ಸ್ಥಾನಗಳಲ್ಲಿ ಮುನ್ನಡೆ ಕಾಯ್ದುಕೊಂಡಿದೆ.

ಅದೇ ರೀತಿ ತೆಲಂಗಾಣದ ಒಟ್ಟು ೧೭ ಲೋಕಸಭಾ ಕ್ಷೇತ್ರಗಳ ಪೈಕಿ ಬಿಜೆಪಿ ೨ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದು, 6 ಕ್ಷೇತ್ರಗಳಲ್ಲಿ ಮುನ್ನಡೆ ಕಾಯ್ದುಕೊಂಡಿದೆ. ಕಾಂಗ್ರೆಸ್ ೧ ಕ್ಷೇತ್ರದಲ್ಲಿ ಗೆದ್ದಿದ್ದು, 7 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿ??.

ಆಂಧ್ರ ಪ್ರದೇಶದಲ್ಲಿ ಒಟ್ಟು ೨೫ ಲೋಕಸಭಾ ಕ್ಷೇತ್ರಗಳಿದ್ದು, ಟಿಡಿಪಿ ೧ ಕ್ಷೇತ್ರದಲ್ಲಿ ಗೆದ್ದು, ೧೫ ಸ್ಥಾನಗಳಲ್ಲಿ ಮುನ್ನಡೆಯಲ್ಲಿದೆ. ಇದೇ ವೇಳೆ ವೈಎಸಆರ್ ಕಾಂಗ್ರೆಸ್ ೪ ಕ್ಷೇತ್ರಗಳ್ಳಿ ಮುನ್ನಡೆ ಮತ್ತು ಬಿಜೆಪಿ ೨ ಕ್ಷೇತ್ರಗಳಲ್ಲಿ ಗೆಲುವು ಮತ್ತು ೧ ಸ್ಥಾನದಲ್ಲಿ ಮುನ್ನಡೆ ಸಾಧಿಸಿದೆ.

ಕೇರಳದಲ್ಲಿ ಒಟ್ಟು ೨೦ ಕ್ಷೇತ್ರಗಳಿದ್ದು, ಈ ಪೈಕಿ ಯುಡಿಎಫ್ ೧೭, ಎಲ್‌ಡಿಎಫ್ ೨ ಮುನ್ನಡೆ ಸಾಧಿಸಿದ್ದು, ಬಿಜೆಪಿ ೧ ಸ್ಥಾನದಲ್ಲಿ ಗೆಲುವು ಕಂಡಿದೆ. ಇದೇ ಮೊದಲ ಬಾರಿಗೆ ಕೇರಳದಲ್ಲಿ ಬಿಜೆಪಿ ತನ್ನ ಖಾತೆ ತೆರೆದಿದೆ.

ಮತ್ತೊಂದೆಡೆ, ಆಂಧ್ರಪ್ರದೇಶ ವಿಧಾನಸಭೆ ಚುಣಾವಣೆಯ ಮತಎಣಿಕೆ ಕಾರ್ಯ ಪ್ರಗತಿಯಲ್ಲಿದ್ದು, ಟಿಡಿಪಿ ಅತಿಹೆಚ್ಚು ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದೆ. ಒಟ್ಟು ೧೭೫ ವಿಧಾನಸಭಾ ಕ್ಷೇತ್ರಗಳ ಪೈಕಿ ಟಿಡಿಪಿ ೪೯ ಸ್ಥಾನಗಳಲ್ಲಿ ಗೆಲುವು ಮತ್ತು 64 ಸ್ಥಾನಗಳಲ್ಲಿ ಮುನ್ನಡೆ ಹೊಂದಿದೆ. ಅದೇರೀತಿ ಜನಸೇನಾ ಪಕ್ಷ ೭ ಕ್ಷೇತ್ರಗಳಲ್ಲಿ ಜಯಗಳಿಸಿದ್ದು, ೮೭ ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದೆ. ಬಿಜೆಪಿ ೪ ಸ್ಥಾನಗಳಲ್ಲಿ ಗೆಲುವು ಮತ್ತು 4 ಕ್ಷೇತ್ರಗಳಲ್ಲಿ ೪ ಹಾಗೂ 8 ಕ್ಷೇತ್ರಗಳಲ್ಲಿ ಮುನ್ನಡೆ ಕಾಯ್ದುಕೊಂಡಿದೆ. ಆಡಳಿತಾರೂಢ ವೈಎಸ್‌ಆರ್ ಕಾಂಗ್ರೆಸ್ ಪಕ್ಷ ಕೇವಲ ೨ ಸ್ಥಾನಗಳಲ್ಲಿ ಗೆಲುವು ಹಾಗೂ 8 ಕ್ಷೇತ್ರಗಳಲ್ಲಿ ಮುನ್ನಡೆಯಲ್ಲಿದೆ. ಆಂಧ್ರಪ್ರದೇಶದಲ್ಲಿ ಸರ್ಕಾರ ರಚಿಸಲು ೮೮ ಸ್ಥಾನಗಳ ಅಗತ್ಯವಿದೆ.

ಇದೇ ವೇಳೆ ಒಡಿಶಾ ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಕಾರ್ಯ ಪ್ರಗತಿಯಲ್ಲಿದ್ದು, ಒಟ್ಟು ೧೪೭ ವಿಧಾನಸಭಾ ಕ್ಷೇತ್ರಗಳ ಪೈಕಿ ಬಿಜೆಪಿ ೧೬ ಸ್ಥಾನಗಳಲ್ಲಿ ಜಯ ದಾಖಲಿಸಿದ್ದು, 64 ಕ್ಷೇತ್ರಗಳ್ಳಿ ಮುನ್ನಡೆ ಸಾಧಿಸಿದೆ. ಅದೇ ರೀತಿ ಬಿಜೆಡಿ ೮ ಸ್ಥಾನಗಳಲ್ಲಿ ಗೆಲುವು ದಾಖಲಿಸಿದ್ದು, 64 ಕ್ಷೇತ್ರಗಳಲ್ಲಿ ೬೪ ?, ಮುನ್ನಡೆ ಕಾಯ್ದುಕೊಂಡಿದೆ. ಉಳಿದಂತೆ ಕಾಂಗ್ರೆಸ್ ೧ ಕ್ಷೇತ್ರದಲ್ಲಿ ಗೆದ್ದಿದ್ದು, ೧೩ ಸ್ಥಾನಗಳಲ್ಲಿ ಸ್ಥಾನಗಳಲ್ಲಿ ಮುನ್ನಡೆಯಲ್ಲಿದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಸತತ ೩ನೇ ಬಾರಿಗೆ ಸ್ಪಷ್ಟ ಬಹುಮತದೊಂದಿಗೆ ಕೇಂದ್ರದಲ್ಲಿ ಅಧಿಕಾರದ ಚುಕ್ಕಾಣಿ ಹಿಡಿದಿರುವುದು ಸಂತಸ ತಂದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೭ ಕ್ಷೇತ್ರಗಳಲ್ಲಿ ಬಿಜೆಪಿ ಹಾಗೂ ೨ ಕ್ಷೇತ್ರಗಳಲ್ಲಿ ಜೆಡಿಎಸ್ ಗೆದ್ದಿದ್ದು, ೨೦ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಗೆಲ್ಲುವುದಾಗಿ ಹೇಳುತ್ತಿದ್ದ ಕಾಂಗ್ರೆಸ್ ನಾಯಕರಿಗೆ ಹಿನ್ನಡೆಯಾಗಿದೆ. ಪಕ್ಷದ ಗೆಲುವುಗೆ ಶ್ರಮಿಸಿದ ಬಿಜೆಪಿ-

ಜೆಡಿಎಸ್ ಮೈತ್ರಿ ಪಕ್ಷದ ಕಾರ್ಯಕರ್ತರು ಹಾಗೂ ಪಕ್ಷದ ಮುಖಂಡರಿಗೆ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು.

**<><*<><>*><>**

ಜನರ ಆಶೀರ್ವಾದ ಹಾಗೂ ಜೆಡಿಎಸ್ ಬಿಜೆಪಿ ಪಕ್ಷಗಳ ಕಾರ್ಯಕರ್ತರ ಪರಿಶ್ರಮದಿಂದ ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಗೆಲುವು ಸಾಧಿಸಲಾಗಿದೆ. ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ.

ಮಂಡ್ಯ ಲೋಕಸಭಾ ಕ್ಷೇತ್ರದ ಫಲಿತಾಂಶದ ಹಿನ್ನೆಲೆಯಲ್ಲಿ ಪಕ್ಷದ ಕಚೇರಿಗೆ ಭೇಟಿ ನೀಡಿ ಸಂಭ್ರಮಾಚರಣೆಯಲ್ಲಿ ಪಾಲ್ಗೊಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯ ಕ್ಷೇತ್ರದಲ್ಲಿ ದೊಡ್ಡ ಪ್ರಮಾಣದಲ್ಲಿ ಮತದಾರರು ಆಶೀರ್ವಾದ ಮಾಡಿದ್ದಾರೆ.

**<><*<><>*><>**

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರಾಭವಗೊಂಡಿರುವುದು ಅಸಮಾಧಾನ ತಂದಿದೆ. ಗೆಲ್ಲಲು ಶಕ್ತಿಮೀರಿ ಪ್ರಯತ್ನಿಸಿದ್ದೇವೆ. ಮತದಾರರು ನೀಡಿರುವ ತೀರ್ಪನ್ನು ವಿನಮ್ರವಾಗಿ ಸ್ವೀಕರಿಸುತ್ತೇವೆ ಎಂದು ಕೆ.ಪಿ.ಸಿ.ಸಿ. ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕಾರಣದಲ್ಲಿ ಸೋಲು-ಗೆಲುವು ಸರ್ವೇ ಸಾಮಾನ್ಯ ಎಂದು ಹೇಳಿದರು.

**<><*<><>*><>**

ಶಾಸಕ ರಾಜ ವೆಂಕಟಪ್ಪ ನಾಯಕ ನಿಧನದಿಂದ ತೆರವಾಗಿದ್ದ ಸುರಪುರ ವಿಧಾನಸಭಾ ಉಪ ಚುನಾವಣೆಯ ಮತ ಎಣಿಕೆಯಲ್ಲಿ ಅವರ ಪುತ್ರ ರಾಜ ವೇಣುಗೋಪಾಲ ನಾಯಕ ಗೆಲುವು ಸಾಧಿಸಿದ್ದಾರೆ. ಬಿಜೆಪಿಯ ರಾಜೂಗೌಡ ಅವರ ವಿರುದ್ಧ ೧೮ ಸಾವಿರದ ೩೨೦ ಮತಗಳಿಂದ ಗೆಲುವು ಸಾಧಿಸಿದ್ದಾರೆ. ರಾಜ ವೇಣುಗೋಪಾಲ ನಾಯಕ ಅವರು ೧ ಲಕ್ಷದ ೧೪ ಸಾವಿರದ ೮೮೬ ಮತಗಳನ್ನು ಪಡೆದಿದ್ದರೆ, ರಾಜೂಗೌಡ ೯೬ ಸಾವಿರದ ೫೬೬ ಮತಗಳನ್ನು ಗಳಿಸಿದ್ದಾರೆ.

**<><*<><>*><>**

ರಾಜ್ಯ ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆಯಲಿರುವ ದ್ವೈವಾರ್ಷಿಕ ಚುನಾವಣೆಗೆ ಸಲ್ಲಿಸಿರುವ ಎಲ್ಲ ನಾಮಪತ್ರಗಳು ಕ್ರಮಬದ್ಧವಾಗಿವೆ. ಈ ಮೂಲಕ ಎಲ್ಲ ೧೧ ಅಭ್ಯರ್ಥಿಗಳು ಮೇಲ್ಮನಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಕಾಂಗ್ರೆಸ್‌ನಿಂದ ಐವಾನ್ ಡಿಸೋಜಾ, ಕೆ. ಗೋವಿಂದರಾಜ್, ಜಗದೇವ ಗುತ್ತೇದಾರ್, ಬಲ್ಕೀಸ್ ಭಾನು, ಎನ್.ಎಸ್. ಬೋಸರಾಜು, ಡಾ.

ಎಸ್. ಯತೀಂದ್ರ, ಕೆ. ವಸಂತಕುಮಾರ್ ಬಿಜೆಪಿಯ ಮೂಳೆ ಮಾರುತಿರಾವ್, ಸಿ.ಟಿ. ರವಿ, ಎನ್. ರವಿಕುಮಾರ್ ಹಾಗೂ ಜೆಡಿಎಸ್‌ನ ಟಿ.ಎನ್. ಜವರಾಯಿಗೌಡ ಅವರ ನಾಮಪತ್ರಗಳು ಕ್ರಮಬದ್ಧವಾಗಿವೆ ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ **<>*><>**